ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಸಂಖ್ಯೆ	:	254 (43)
ಸದಸ್ಯರ ಹೆಸರು	:	ಶ್ರೀ ಅರುಣ ಶಹಾಪುರ
ಉತ್ತರಿಸುವ ದಿನಾಂಕ	:	04.03.2020
ಉತ್ತರಿಸುವ ಸಚಿವರು	:	ಮಾನ್ಯ ಉಪ ಮುಖ್ಯಮಂತ್ರಿಯವರು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು)

ಕ್ರ.ಸಂ.	ವಿಷಯ	ಉತ್ತರ
ಅ)	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿನ ಸಿಬ್ಬಂದಿಗಳನ್ನು ಆಯಾ ಇಲಾಖಾ ಸಿಬ್ಬಂದಿಗಳಾಗಿ ವಿಲೀನಗೊಳಿಸುವ ಕುರಿತು ಸರ್ಕಾರದ ನಿಲುವೇನು;	ವಿವಿಧ ಉದ್ದೇಶಗಳನ್ನು ಈಡೇರಿಸುವ ಸಲುವಾಗಿ ಸರ್ಕಾರದಲ್ಲಿ ಸಂಘ/ಮಂಡಳಿ/ನಿಗಮಗಳನ್ನು ಸ್ಥಾಪಿಸಲಾಗಿರುತ್ತದೆ. ಅದರಂತೆ ಸಮಾಜ ಕಲ್ಯಾಣ ಇಲಾಖೆಯಲ್ಲಿ ಸಹ ಗ್ರಾಮೀಣ ಪ್ರದೇಶದ ಬಡ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ವಸತಿ ಶಾಲೆಗಳನ್ನು ಪ್ರಾರಂಭಿಸಿ ನಿರ್ವಹಿಸಲು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಸ್ಥಾಪಿಸಲಾಗಿದೆ. ಈ ಸಂಘವು ಕರ್ನಾಟಕ ಸಹಕಾರ ಸಂಘಗಳ ನೋಂದಣಿ ಕಾಯ್ದೆ 1960 ರಡಿಯಲ್ಲಿ ಸ್ಥಾಪಿತವಾದ ಸಂಸ್ಥೆಯಾಗಿದ್ದು, ಸಂಘ ಸಂಸ್ಥೆಗಳ ಸಿಬ್ಬಂದಿಗಳನ್ನು ರಾಜ್ಯ ಸಿವಿಲ್ ಸೇವೆಯಲ್ಲಿ ವಿಲೀನಗೊಳಿಸಲು ಅವಕಾಶವಿರುವುದಿಲ್ಲ.
ಆ)	ಇದೇ ಕ್ರೈಸ್ ಅಡಿ ಕಾರ್ಯನಿರ್ವಹಿಸುತ್ತಿದ್ದ ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ಶಾಲೆಗಳ ಸಿಬ್ಬಂದಿಗಳನ್ನು ಅಲ್ಪಸಂಖ್ಯಾತ ಕಲ್ಯಾಣ ಇಲಾಖಾ ಸಿಬ್ಬಂದಿಗಳನ್ನಾಗಿ ಪರಿಗಣಿಸಲಾಗಿದ್ದು. ಇದೇ ಮಾದರಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಿಬ್ಬಂದಿಗಳನ್ನು ವಿಲೀನ ಮಾಡಲು ತಾರತಮ್ಯ ಮಾಡುತ್ತಿರುವುದಕ್ಕೆ ಕಾರಣಗಳೇನು:	ಸದರಿ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳಂತೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ನೇಮಿಸಲಾಗುತ್ತಿದೆ. ಮಂಜೂರಾದ ಗ್ರೂಪ್-ಡಿ ಹುದ್ದೆಗಳನ್ನು ಆರ್ಥಿಕ ಇಲಾಖೆಯ ನಿರ್ದೇಶನದನ್ವಯ ಹೊರಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲಾಗುತ್ತಿದೆ. ಶಿಕ್ಷಣ ಇಲಾಖೆಯಿಂದ ನೇಮಿಸಿಕೊಂಡಿರುವ ಶಿಕ್ಷಕರುಗಳಿಗೆ ನೀಡುವ ವೇತನದಂತೆಯೇ ಸಂಘದ ಶಿಕ್ಷಕರುಗಳಿಗೂ ಸಹ ನೀಡಲಾಗುತ್ತಿದೆ. ಅಲ್ಲದೇ ಶಾಲೆ ಆವರಣದಲ್ಲಿ ಎಲ್ಲಾ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ವಸತಿ ಸೌಕರ್ಯ ಮತ್ತು ಇತರೇ ಸವಲತ್ತುಗಳನ್ನು ನೀಡಲಾಗುತ್ತಿದೆ. ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಮೇಲ್ಕಂಡ ಸಂಘ ಸ್ವಾಯತ್ತ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ. ಅಲ್ಪಸಂಖ್ಯಾತಕಲ್ಯಾಣ ಇಲಾಖೆಯವರು ಅವರದೇ ಆದ ಕಾರಣಗಳಿಂದ ಅಲ್ಪಸಂಖ್ಯಾತ ವಸತಿ ಶಾಲೆಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಬೇರ್ಪಡಿಸಿ ಸಿಬ್ಬಂದಿಗಳನ್ನು ಸಹ ನೇಮಿಸಿಕೊಂಡಿರುತ್ತಾರೆ. ಆದ್ದರಿಂದ, ಸದರಿ ವಿಷಯದಲ್ಲಿ ತಾರತಮ್ಯ ಮಾಡುತ್ತಿರುವ ಪ್ರಶ್ನೆ ಉದ್ಭವಿಸುವುದಿಲ್ಲ.

ಇ)	ಇದನ್ನು ಸರಿಪಡಿಸಲು ಸರ್ಕಾರವು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು? (ಸಂಪೂರ್ಣ ವಿವರ ನೀಡುವುದು)	ಉದ್ಭವಿಸುವುದಿಲ್ಲ

ಸಕಇ 68 ಮೊದೇಶಾ 2020

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಯವರು (ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು)